Government of Karnataka

Deposition Sheet Form No. R.P. 57

ಪ್ರಥಮ ದರ್ಜೆ ನ್ಯಾಯಿಕ ದಂಡಾಧಿಕಾರಿಗಳವರ ನ್ಯಾಯಾಲಯ, ಲಿಂಗಸಗೂರ

ಸಿ.ಸಿ ನಂಬರ 858/2025

ಸಿ ಡಬ್ಲ್ಯೂ-14
ಪಿ ಡಬ್ಲ್ಯೂ-4

| | | |
|---|---|---|
| ಸಾಕ್ಷಿದಾರರ ಹೆಸರು | ಃ- | ರಮೇಶ |
| ತಂದೆಯ ಹೆಸರು | ಃ- | ಶರಣಪ್ಪ |
| ವಯಸ್ಸು | ಃ- | 32 ವರ್ಷ |
| ಉದ್ಯೋಗ | ಃ- | ವ್ಯಾಪಾರ |
| ವಾಸಸ್ಥಳ | ಃ- | ಕರಡಕಲ |

ದಿ.24-04-2026 ರಂದು ಸಾಕ್ಷಿಯನ್ನು ಕರೆಯಿಸಿ ಪ್ರಮಾಣವಚನ ಭೋದಿಸಲಾಯಿತು.

***ಮುಖ್ಯ ವಿಚಾರಣೆ: ಮಾನ್ಯ ಸಹಾಯಕ ಸರ್ಕಾರಿ ಅಭಿಯೋಜಕರಿಂದ.***

ಚಾ.ಸಾ-15 ಮತ್ತು ಆರೋಪಿ ಪರಿಚಯ ಇದೆ. ಸುಮಾರು 1 ವರ್ಷದ ಹಿಂದೆ ನಾನು ಪೊಲೀಸ ಠಾಣೆಗೆ ಹೋದಾಗ, ಪೋಲಿಸರು ಠಾಣೆಯಲ್ಲಿ ಒಂದು ದಾಖಲೆಗೆ ನನ್ನ ಸಹಿ ಪಡೆದಿರುತ್ತಾರೆ. ವಾಹನ ಜಪ್ತಿ ಪಂಚನಾಮೆಯನ್ನು ನೋಡಿ ಗುರುತಿಸಿದ್ದು ಪಂಚನಾಮೆಯನ್ನು ಅದನ್ನು ಈಗ ನಿ.ಪಿ-7 ಎಂದು ಗುರುತಿಸಲಾಗಿದ್ದು, ಸಾಕ್ಷಿಯ ಸಹಿಯನ್ನು ನಿ.ಪಿ-7(ಎ) ಎಂದು ಗುರುತಿಸಲಾಯಿತು. ನಮ್ಮ ಸಮಕ್ಷಮ ಘಟನಾ ಸ್ಥಳದಲ್ಲಿ ಯಾವುದೇ ಪಂಚನಾಮೆ ಮಾಡಿಲ್ಲ. ಸಾಕ್ಷಿಯು ಪೋಟೋವನ್ನು ನೋಡಿ ಗುರುತಿಸಿದ್ದು ಅದನ್ನು ಈಗ ನಿ.ಪಿ-8 ಮತ್ತು 9 ಎಂದು ಗುರುತಿಸಲಾಗಿದೆ. ಪೋಲಿಸರು ಹೇಳಿದ ಮೇರೆಗೆ ನಾನು ಪೋಟೋದಲ್ಲಿ ನಿಂತಿರುತ್ತೇನೆ ನಿ.ಪಿ-7 ರಲ್ಲಿ ಏನು ಬರೆದಿದ್ದಾರೆ ಎಂದು ನನಗೆ ಗೊತ್ತಿಲ್ಲ.

**(ಮಾನ್ಯ ಎಪಿಪಿ ಅವರು ಸಾಕ್ಷಿಯನ್ನು ಪ್ರತಿಕೂಲ ಸಾಕ್ಷಿ ಎಂದು ಪರಿಗಣಿಸಿ ಪಾಟೀ ಸವಾಲಿಗೆ ಅನುಮತಿ ಕೇಳಿರುತ್ತಾರೆ. ಅನುಮತಿ ನೀಡಲಾಯಿತು.)**

**ಪಾಟೀ ಸವಾಲುಃ ಮಾನ್ಯ ಎಪಿಪಿ ಅವರಿಂದ**

ದಿನಾಂಕ 23-10-2024 ರಂದು ಆರೋಪಿಯನ್ನು ಹಾಜರುಪಡಿಸಿದ ಕೆಂಪು ಬಣ್ಣದ ಬಜಾಜ ಮೋಟಾರ ಸೈಕಲ ನಂ. ಕೆಎ-36 ಇಕೆ 1241 ನ್ನು ನನ್ನ ಮತ್ತು ಚಾಸಾ-15 ರವರನ್ನು ಸಮಕ್ಷಮ ಪೊಲೀಸ ಠಾಣೆ ಆವರಣದಲ್ಲಿ ಬೆಳಿಗ್ಗೆ 11-30 ರಿಂದ 12-45 ವರೆಗೆ ಪಂಚನಾಮೆ ಮಾಡಿ ಮೋಟಾರ ಸೈಕಲನ್ನು ಜಪ್ತಿ ಪಡಿಸಿಕೊಂಡು ನಮ್ಮಗಳ ಸಹಿ ಪಡೆದಿರುತ್ತಾರೆ ಎಂದರೆ ಸರಿಯಲ್ಲ. ಸ್ಥಳದಲ್ಲಿ ನಿ.ಪಿ-8 ಮತ್ತು 9 ರಂತೆ ಪೋಟೋ ತೆಗೆಸಿರುತ್ತಾರೆ ಎಂದರೆ ಸರಿಯಲ್ಲ.

ನಿ.ಪಿ-7 ರಲ್ಲಿರುವ ವಿಷಯ ಗೊತ್ತಿದ್ದರೂ ಸಹ ಆರೋಪಿಗೆ ಸಹಾಯ ಮಾಡಲು ಸುಳ್ಳು ಸಾಕ್ಷ್ಯ ಹೇಳುತ್ತಿದ್ದೇನೆ ಎಂದರೆ ಸರಿಯಲ್ಲ.

**ಪಾಟೀ ಸವಾಲು ಶ್ರೀ ಬಿ.ವಿ ವಕೀಲರಿಂದಃ**

ಏನೂ ಇಲ್ಲ.

ಮರು ವಿಚಾರಣೆ ಃ

ಇಲ್ಲ.

(ತೆರೆದ ನ್ಯಾಯಾಲಯದಲ್ಲಿ ನನ್ನ ಹೇಳಿಕೆಯಂತೆ ಬೆರಳಚ್ಚು ಮಾಡಿಸಲಾಯಿತು)

ಓ. ಹೇ. ಕೇ. ಸರಿ ಇದೆ

ಸಹಿ/-

ಪ್ರಧಾನ ಸಿವಿಲ. ನ್ಯಾಯಾಧೀಶರು ಮತ್ತು ಜೆಎಂಎಫ್‌ಸಿ
ಲಿಂಗಸುಗೂರು.